ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1105
2. ಸದಸ್ಯರ ಹೆಸರು : ಶ್ರೀ ಕೆ.ಹರೀಶ್ ಕುಮಾರ್
3. ಉತ್ತರಿಸುವ ದಿನಾಂಕ : 21.09.2021
4. ಉತ್ತರಿಸುವ ಸಚಿವರು : ಸಹಕಾರ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಒಟ್ಟು ಎಷ್ಟು ಎ.ಪಿ.ಎಂ.ಸಿ.ಗಳನ್ನು ಸ್ಥಾಪಿಸಲಾಗಿದೆ; ಎ.ಪಿ.ಎಂ.ಸಿ.ಗಳು ಒಟ್ಟು ಎಷ್ಟು ಜಮೀನನ್ನು ಹೊಂದಿವೆ;	ರಾಜ್ಯ ಸರ್ಕಾರವು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966 ರಡಿ 160 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳನ್ನು ಸ್ಥಾಪಿಸಲಾಗಿದೆ. ರಾಜ್ಯದ 160 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಒಟ್ಟು 8584 ಎಕರೆ ಜಮೀನನ್ನು ಹೊಂದಿರುತ್ತವೆ.
ಆ)	ರಾಜ್ಯದ ಎ.ಪಿ.ಎಂ.ಸಿ ಕಾಯ್ದೆ ತಿದ್ದುಪಡಿ ನಂತರ ಮಾರುಕಟ್ಟೆ ಪ್ರಾಂಗಣದ ಉಪ ಮಾರುಕಟ್ಟೆ ಪ್ರಾಂಗಣದ ಮತ್ತು ಮಾರುಕಟ್ಟೆ ಉಪ ಪ್ರಾಂಗಣದ ಹೊರಗಡೆ ಈ ಹಿಂದೆ ಅನಧಿಕೃತ ಲೈಸೆನ್ಸ್ ಪಡೆದು ವ್ಯವಹರಿಸುತ್ತಿರುವ ಪೇಟೆ ಕಾರ್ಯಕರ್ತರು ಎ.ಪಿ.ಎಂ.ಸಿ. ಕಾಯ್ದೆ ಕಲಂ 65(2) ರನ್ವಯ ಮಾರುಕಟ್ಟೆ ಶುಲ್ಕವನ್ನು ಸಮಿತಿಗೆ ಪಾವತಿಸಬೇಕೆ;	ಮಾರುಕಟ್ಟೆ ವ್ಯವಸ್ಥೆಯನ್ನು ಸರಳೀಕರಣಗೊಳಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು ಕಾಯ್ದೆ ಸಂ:59/2020ರ ಮೂಲಕ ದಿನಾಂಕ:31.12.2020 ರಂದು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 8(2) ಹಾಗೂ ಕಲಂ 117ಕ್ಕೆ ತಿದ್ದುಪಡಿ ಮಾಡಿ ಜಾರಿಗೆ ನೀಡಲಾಗಿದೆ. ಕಾಯ್ದೆ ತಿದ್ದುಪಡಿಯಿಂದಾಗಿ ಮಾರುಕಟ್ಟೆ ಸಮಿತಿಗಳ ನಿಯಂತ್ರಣವನ್ನು ಮಾರುಕಟ್ಟೆ ಪ್ರಾಂಗಣ, ಉಪ ಮಾರುಕಟ್ಟೆ ಪ್ರಾಂಗಣ ಹಾಗೂ ಮಾರುಕಟ್ಟೆ ಉಪ ಪ್ರಾಂಗಣಗಳಲ್ಲಿ ನಡೆಯುವ ಅಧಿಸೂಚಿತ ಕೃಷಿ ಉತ್ಪನ್ನಗಳ ವಹಿವಾಟಿಗೆ ಮಾತ್ರ ಸೀಮಿತಗೊಳಿಸಲಾಗಿದ್ದು, ಪ್ರಾಂಗಣದ ಹೊರಗಡೆ ವ್ಯವಹರಿಸುವ ವಹಿವಾಟಿಗೆ ಯಾವುದೇ ಶುಲ್ಕ ವಿಧಿಸಲು ಅವಕಾಶವಿಲ್ಲ. ಕಾಯ್ದೆ ಕಲಂ 72(4) ರಡಿ ನಿರ್ದಿಷ್ಟಪಡಿಸಿರುವಂತೆ ರಾಜ್ಯದಲ್ಲಿನ ಯಾವುದೇ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಪ್ರಾಂಗಣಗಳಲ್ಲಿ ಅಧಿಸೂಚಿತ ಕೃಷಿ ಉತ್ಪನ್ನಗಳಲ್ಲಿ ವರ್ತಕರಾಗಿ ವ್ಯವಹರಿಸಲು ಏಕೀಕೃತ ಲೈಸೆನ್ಸ್ ಪಡೆಯಬೇಕಿರುತ್ತದೆ ಹಾಗೂ ಕಲಂ 65(2)ರಡಿ ಕೃಷಿ ಉತ್ಪನ್ನಗಳ ಖರೀದಿದಾರರು ಮಾರಾಟದ ಮೌಲ್ಯದ ಮೇಲೆ ಮಾರುಕಟ್ಟೆ ಶುಲ್ಕ ಪಾವತಿಸಲು ಹಾಗೂ ಸಮಿತಿಗಳು ಆಕರಿಸಲು ನಿರ್ದಿಷ್ಟಪಡಿಸಿದೆ.

ಇ)	ಎ.ಪಿ.ಎಂ.ಸಿ ಕಾಯ್ದೆ ತಿದ್ದುಪಡಿಯ ಮೊದಲು ರಾಜ್ಯದ ಎ.ಪಿ.ಎಂ.ಸಿ. ಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಹಾಗೂ ಎಷ್ಟು ಸಿಬ್ಬಂದಿಯನ್ನು ರಾಜ್ಯದ ಎಲ್ಲಾ ಎ.ಪಿ.ಎಂ.ಸಿ. ಗಳಿಂದ ಕೈಬಿಡಲಾಗಿದೆ; ಅವರುಗಳಿಗೆ ಸರ್ಕಾರ ಕೈಗೊಂಡಿರುವ ಪರ್ಯಾಯ ವ್ಯವಸ್ಥೆ ಏನು?	ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ಕ್ಕೆ ತಿದ್ದುಪಡಿ ಪೂರ್ವದಲ್ಲಿ ರಾಜ್ಯದಲ್ಲಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಒಟ್ಟು 2969 ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ಹಿಸುತ್ತಿದ್ದರು. ಕಾಯ್ದೆಗೆ ತಿದ್ದುಪಡಿ ನಂತರದಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದ 1231 ಸಿಬ್ಬಂದಿಗಳನ್ನು ಕೈಬಿಡಲಾಗಿದೆ. ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಲಭ್ಯವಿರುವ ಆದಾಯಕ್ಕನುಗುಣವಾಗಿ ಖಾಸಗಿ ಮಾನವ ಸಂಪನ್ಮೂಲ ಸೇವೆ ಒದಗಿಸುವ ಏಜೆನ್ಸಿಗಳ ಮುಖಾಂತರ ಟೆಂಡರ್ ಕರೆದು 11 ತಿಂಗಳಿಗೊಮ್ಮೆ ಹೊರಗುತ್ತಿಗೆ ಸಿಬ್ಬಂದಿ ಸೇವೆ ಪಡೆಯಲಾಗುತ್ತಿರುತ್ತದೆ. ಪ್ರಸ್ತುತ ಸಮಿತಿಗಳ ಅವಶ್ಯಕತೆಗಳಿಗೆ ಅನುಗುಣವಾಗಿ ಹೊರಗುತ್ತಿಗೆ ಸಂಸ್ಥೆಯಿಂದ ನಿಯೋಜಿಸಲಾದ ಒಟ್ಟು 1738 ಹೊರಗುತ್ತಿಗೆ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಅವರ ಮೂಲಕ ಅಗತ್ಯ ನಿರ್ವಹಣೆಯನ್ನು ಮಾಡಲಾಗುತ್ತಿದೆ.

ಸಿಒ 255 ಎಂಆರ್‌ಇ 2021

(ಎಸ್.ಟಿ. ಸೋಮಶೇಖರ್)
ಸಹಕಾರ ಸಚಿವರು